# ಕರ್ನಾಟಕ ಸರ್ಕಾರ

ಸಂಖ್ಯೆ: ಗ್ರಾಅಪ 40 ಗ್ರಾಪಂಅ 2018

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ:25-01-2019.

ಇವರಿಂದ:

ಸರ್ಕಾರದ ಕಾರ್ಯದರ್ಶಿಗಳು (ಪಂ.ರಾಜ್),
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ,
ಬಹುಮಹಡಿ ಕಟ್ಟಡ,
ಬೆಂಗಳೂರು.

ಇವರಿಗೆ

ರಾಜ್ಯದ ಎಲ್ಲಾ ಉಪವಿಭಾಗಧಿಕಾರಿಗಳು.

ಮಾನ್ಯರೆ,

**ವಿಷಯ:** ಗ್ರಾಮ ಪಂಚಾಯತಿ ಅಧ್ಯಕ್ಷ ಮತ್ತು ಉಪಾಧ್ಯಕ್ಷ ಹುದ್ದೆಯ ಅವಧಿ, ರಾಜೀನಾಮೆ ಮತ್ತು ಗ್ರಾಮ ಪಂಚಾಯತಿ ಅಧ್ಯಕ್ಷನು ಅಥವಾ ಉಪಾಧ್ಯಕ್ಷನ ವಿರುದ್ಧ ಅವಿಶ್ವಾಸ ಸೂಚನೆ ಬಗ್ಗೆ.

**ಉಲ್ಲೇಖ:** (1) ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ಗ್ರಾಮ ಪಂಚಾಯತಿಯ ಅಧ್ಯಕ್ಷ ಮತ್ತು ಉಪಾಧ್ಯಕ್ಷರ ವಿರುದ್ಧ ಅವಿಶ್ವಾಸ ಸೂಚನೆ ಮಂಡನೆ) ನಿಯಮಗಳು, 1994.

(2) ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ಗ್ರಾಮ ಪಂಚಾಯತಿಯ ಅಧ್ಯಕ್ಷ ಮತ್ತು ಉಪಾಧ್ಯಕ್ಷರ ವಿರುದ್ಧ ಅವಿಶ್ವಾಸ ಸೂಚನೆ ಮಂಡನ) (ತಿದ್ದುಪಡಿ) ನಿಯಮಗಳು, 2018

****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 49 ರಡಿ ಗ್ರಾಮ ಪಂಚಾಯತಿಯ ಅಧ್ಯಕ್ಷನ ಅಥವಾ ಉಪಾಧ್ಯಕ್ಷನ ವಿರುದ್ಧ ಅವಿಶ್ವಾಸ ಸೂಚನೆ ಮಂಡಿಸಲು ಅವಕಾಶ ಕಲ್ಪಿಸಲಾಗಿದ್ದು, ಈ ಉದ್ದೇಶಕ್ಕಾಗಿ ಅದರಂತೆ ಉಪವಿಭಾಗಾಧಿಕಾರಿಗಳನ್ನು ಸಕ್ಷಮ ಪ್ರಾಧಿಕಾರಿಯನ್ನಾಗಿ ನಿರ್ದಿಷ್ಟಪಡಿಸಿದೆ.

ಗ್ರಾಮ ಪಂಚಾಯತಿ ಅಧ್ಯಕ್ಷ ಮತ್ತು ಉಪಾಧ್ಯಕ್ಷರ ವಿರುದ್ಧ ಅವಿಶ್ವಾಸ ಸೂಚನೆ ಬಗ್ಗೆ ಉಲ್ಲೇಖ (1) ಮತ್ತು (2) ರಲ್ಲಿ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ಗ್ರಾಮ ಪಂಚಾಯತಿಯ ಅಧ್ಯಕ್ಷ ಮತ್ತು ಉಪಾಧ್ಯಕ್ಷರ ವಿರುದ್ಧ ಅವಿಶ್ವಾಸ ಸೂಚನೆ ಮಂಡನೆ) ನಿಯಮಗಳು, 1994 ಮತ್ತು 2018 ಅನ್ನು ರೂಪಿಸಲಾಗಿದ್ದು, ಉಪವಿಭಾಗಾಧಿಕಾರಿ ರವರು ಅವಿಶ್ವಾಸ ಸೂಚನೆಗೆ ಸಂಬಂಧಿಸಿದ ನೋಟೀಸನ್ನು ಸ್ವೀಕರಿಸಿದ ದಿನಾಂಕದಿಂದ 30 ದಿವಸಗಳಿಗೆ ಮೀರದಂತೆ ಅವಿಶ್ವಾಸ ಸೂಚನೆ ಸಭೆ ಕರೆದು ಅದರಂತೆ ಅವಿಶ್ವಾಸ ಸೂಚನೆ ಮಂಡಿಸಲು ಕ್ರಮ ವಹಿಸಬೇಕಾಗಿರುತ್ತದೆ.

ಆದರೆ ಕೆಲವು ಉಪವಿಭಾಗಾಧಿಕಾರಿಗಳು 30 ದಿವಸಗಳು ಮೀರಿದ ನಂತರ ಅವಿಶ್ವಾಸ ಸೂಚನೆ ಮಂಡನೆಗೆ ಕ್ರಮ ವಹಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ. ಇದು ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ಮತ್ತು ಸಂಬಂಧಿಸಿದ ನಿಯಮಗಳ ಆಶಯಕ್ಕೆ ವಿರುದ್ಧವಾಗಿದ್ದು, ಸ್ಪಷ್ಟ ಉಲ್ಲಂಘನೆಯಾಗಿರುತ್ತದೆ.

ಆದುದರಿಂದ ರಾಜ್ಯದ ಎಲ್ಲಾ ಉಪವಿಭಾಗಾಧಿಕಾರಿಗಳು ಗ್ರಾಮ ಪಂಚಾಯತಿಯ ಅಧ್ಯಕ್ಷನ ಅಥವಾ ಉಪಾಧ್ಯಕ್ಷನ ವಿರುದ್ಧ ಅವಿಶ್ವಾಸ ಸೂಚನೆ ಬಗ್ಗೆ ಪಂಚಾಯತ್ ರಾಜ್ ಕಾಯ್ದೆ ಮತ್ತು ನಿಯಮಗಳಂತೆ 30 ದಿವಸಗಳಿಗೆ ಮೀರದಂತೆ ಅವಿಶ್ವಾಸ ಸೂಚನೆ ಸಭೆ ಕರೆದು ಅದರಂತೆ ಅವಿಶ್ವಾಸ ಸೂಚನೆ ಮಂಡಿಸಲು ಕ್ರಮ ವಹಿಸುವಂತೆ ತಿಳಿಸಿದೆ. ಈ ಪ್ರಕ್ರಿಯೆಯಲ್ಲಿ ಯಾವುದೇ ಲೋಪವಾದಲ್ಲಿ ಸಂಬಂಧಪಟ್ಟ ಉಪವಿಭಾಗಾಧಿಕಾರಿಗಳನ್ನು ನೇರ ಹೊಣೆಗಾರರನ್ನಾಗಿ ಮಾಡಲಾಗುವುದು ಎಂದು ತಮಗೆ ತಿಳಿಸಲು ನಾನು ನಿರ್ದೇಶಿಸಲ್ಪಟ್ಟಿದ್ದೇನೆ.

(ಸರ್ಕಾರದ ಕಾರ್ಯದರ್ಶಿಗಳು (ಪಂ.ರಾಜ್) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ರವರಿಂದ ಅನುಮೋದಿತ)

ತಮ್ಮ ವಿಶ್ವಾಸಿ,

25/1/19

(ಮುಬಾರಕ್ ಅಹ್ಮದ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಪ್ರತಿ: ಮಾಹಿತಿ ಮತ್ತು ಅಗತ್ಯ ಕ್ರಮಕ್ಕಾಗಿ:

1. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಕಂದಾಯ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು
2. ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳು.
3. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
4. ರಾಜ್ಯದ ಎಲ್ಲಾ ತಾಲ್ಲೂಕು ಪಂಚಾಯತಿಯ ಕಾರ್ಯನಿರ್ವಾಹಕ ಅಧಿಕಾರಿಗಳು.
5. ರಾಜ್ಯದ ಎಲ್ಲಾ ಗ್ರಾಮ ಪಂಚಾಯತಿಗಳ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು.